have spoken from this side when we had that sammelan,

Sri M. Veerappa Moily : Thanking you, for reminding it.

ಆದ್ದರಿಂದ ತಾವು ಇದನ್ನು ಮಂಜೂರು ಮಾಡಿಕೊಡಬೇಕೆಂದು ತಮ್ಮ ಮುಖೇನ ಮಾನ್ಯ ಸದಸ್ಯರನ್ನು ಕೇಳಿಕೊಳ್ಳುತ್ತೇನೆ.

ಶ್ರೀ ವಾಟಾಳ್ ನಾಗರಾಜ್:- ಮಾನ್ಯ ಅಧ್ಯಕ್ಷರೇ, ಗಡಿ ಪ್ರದೇಶದ ಅಭಿವೃದ್ಧಿ ಬಗ್ಗೆ 15 ಕೋಟಿ ರೂಪಾಯಿಗಳನ್ನು ಕೊಟ್ಟಿದ್ದಾರೆ. ತಮಗೆ ಗಡಿ ಬಗ್ಗೆ ಅಪಾರವಾದ ಪ್ರೀತಿ ಇದೆ. ತಾವು ಒಂದು ಭರವಸೆ ಕೊಡಬೇಕು. ಗಡಿ ಪ್ರದೇಶಕ್ಕೆ ಇಟ್ಟಿರುವ ಹಣ ಸ್ವಲ್ಪ ಜಾಸ್ತಿ ಮಾಡಬೇಕೆಂದು ನಾನು ತಮಗೆ ಒಂದು ಸಲಹೆ ಕೊಡುತ್ತೇನೆ.

ಶ್ರೀ ಎಂ. ವೀರಪ್ಪ ಮೊಯಿಲಿ:- ಹೆಚ್ಚು ಮಾಡಲಿಕ್ಕೆ ಪ್ರಯತ್ನ ಮಾಡೋಣ.

ಅಧ್ಯಕ್ಷರು:- ಭರವಸೆ ಕೊಟ್ಟಿದ್ದಾರಲ್ಲಾ. ಈಗ ಪೂರಕ ಅಂದಾಜುಗಳ 3ನೇ ಕಂತಿನ ಪಟ್ಟಿಯನ್ನು ಸಭೆಯ ಮತಕ್ಕೆ ಹಾಕುತ್ತೇನೆ.

ಶ್ರೀ ಆರ್. ವಿ. ದೇಶಪಾಂಡೆ:- ಮಾನ್ಯ ಅಧ್ಯಕ್ಷರೇ, ತಾವು ಮತಕ್ಕೆ ಹಾಕುತ್ತಿದ್ದೀರಿ. ನಾನು ತಮ್ಮ ಮುಖಾಂತರ ಇಡೀ ಸದನಕ್ಕೆ ಅಪೀಲು ಮಾಡುತ್ತಿದ್ದೇನೆ. Search your conscience and vote against the bashful expenditure of Rs. 1 crore 29 lakhs... The chief Minister, - The Ministers ಎಲ್ಲರೂ ವಿರೋಧ ಮಾಡಿದ್ದೀರಿ. ನೀವು ಇದನ್ನು ವಿರೋಧ ಮಾಡದೇ ಇದ್ದರೆ,I will have to say that you are all hypocrites just remove Bangarappa.

ಅಧ್ಯಕ್ಷರು:- ಪ್ರಸ್ತಾವ ಏನೆಂದರೆ 1992-93ನೇ ಸಾಲಿನ ಪೂರಕ ಅಂದಾಜು ಬೇಡಿಕೆಗಳನ್ನು ಸಭೆಯ ಮತಕ್ಕೆ ಹಾಕುತ್ತೇನೆ. ಬೇಡಿಕೆಗಳ ಸಂಖ್ಯೆ 1, 2, 4, 5, 7, 8, 10, 11, 14,15, 17 ರಿಂದ 22, 27ರಿಂದ 31, 33 ರಿಂದ 36, 38, 39, 40, 41, 43, 45, 47, 49, 50, 51, 53, 55, 56 ಹಾಗೂ 58ನೇ ಬೇಡಿಕೆಗಳ ಬಗ್ಗೆ ಸರ್ಕಾರದವರು ಸದರಿ ವೆಚ್ಚವನ್ನು ಸಂದಾಯ ಮಾಡುವಂತಾಗಲು ಪೂರಕ ಅನುದಾನ ಪಟ್ಟಿಯಲ್ಲಿ ಸೂಚಿಸಿರುವ ಮೊಬಲಗಿಗೆ ಮಿಗಾದಂತೆ ಇರುವ ಮೊತ್ತವನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

ಪ್ರಸ್ತಾವವನ್ನು ಅಂಗೀಕರಿಸಲಾಯಿತು ಮತ್ತು ಬೇಡಿಕೆಗಳಿಗೆ ಮಂಜೂರಾತಿ ನೀಡಲಾಯಿತು.

ಶಾಸನ ರಚನಾ ಕಾರ್ಯಕಲಾಪಗಳು

ಎ) ವಿಧೇಯಕಗಳ ಮಂಡನೆಗೆ ಅನುಮತಿ ಕೋರಿಕೆ

1) ಕರ್ನಾಟಕ ನ್ಯಾಯವಾದಿಗಳ ಕಲ್ಯಾಣ ನಿಧಿ(ತಿದ್ದುಪಡಿ) ವಿಧೇಯಕ 1993

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಹಾರನಹಳ್ಳಿ ಸ್ವಾಮಿ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು):- ಮಾನ್ಯ ಅಧ್ಯಕ್ಷರೇ ''ಕರ್ನಾಟಕ ನ್ಯಾಯವಾದಿಗಳ ಕಲ್ಯಾಣ ನಿಧಿ(ತಿದ್ದುಪಡಿ) ವಿಧೇಯಕ, 1993ವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು :- ಪ್ರಸ್ತಾಪ ಏನೆಂದರೆ ''ಕರ್ನಾಟಕ ನ್ಯಾಯವಾದಿಗಳ ಕಲ್ಯಾಣ ನಿಧಿ(ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಹಾರನಹಳ್ಳಿ ರಾಮಸ್ವಾಮಿ(ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು):- ಮಾನ್ಯ ಅಧ್ಯಕ್ಷರೇ, ''ಕರ್ನಾಟಕ ನ್ಯಾಯವಾದಿಗಳ ಕಲ್ಯಾಣ ನಿಧಿ(ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು ಅನುಬಂಧ I, II ವಿಧೇಯಕವನ್ನು ಮಂಡಿಸಲಾಗಿದೆ.

2) ಕರ್ನಾಟಕ ಭೂ ಕಂದಾಯ(ತಿದ್ದುಪಡಿ) ವಿಧೇಯಕ 1993 ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಂ. ರಾಜಶೇಖರ ಮೂರ್ತಿ(ಕಂದಾಯ ಸಚಿವರು):- ಮಾನ್ಯ ಅಧ್ಯಕ್ಷರೇ, ''1993ನೇ ಸಾಲಿನ ಕರ್ನಾಟಕ ಭೂ ಕಂದಾಯ(ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು:- ಪ್ರಸ್ತಾವ ಏನೆಂದರೆ ''ಕರ್ನಾಟಕ ಭೂ ಕಂದಾಯ(ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು''.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಎಂ. ರಾಜಶೇಖರ ಮೂರ್ತಿ(ಕಂದಾಯ ಸಚಿವರು): ಮಾನ್ಯ ಅಧ್ಯಕ್ಷರೇ, ''ಕರ್ನಾಟಕ ಭೂ ಕಂದಾಯ(ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು:- ಅನುಬಂಧ I, II ವಿಧೇಯಕವನ್ನು ಮಂಡಿಸಲಾಗಿದೆ.

1993ನೇ ಕರ್ನಾಟಕ ಧನವಿನಿಯೋಗ (ನಂಬರ್-2) ವಿಧೇಯಕದ ಮಂಡನೆಗೆ ತಾಂತ್ರಿಕ ಕಾರಣಗಳಿಂದ ವಿರೋಧ.

ಶ್ರೀ.ಎಂ.ವೀರಪ್ಪ ಮೊಯ್ಲಿ (ಮುಖ್ಯ ಮಂತ್ರಿಯವರು):- ಸನ್ಮಾನ್ಯ ಅಧ್ಯಕ್ಷರೇ, 1993ನೇ ಸಾಲಿನ ಕರ್ನಾಟಕ ಧನವಿನಿಯೋಗ ನಂಬರ್-2, ವಿಧೇಯಕವನ್ನು ಮಂಡಿಸಲು ಅನುಮತಿಯನ್ನು ಕೋರುತ್ತೇನೆ.

ಶ್ರೀ.ಹೆಚ್.ವಿಶ್ವನಾಥಯ್ಯ:- ಮಾನ್ಯ ಅಧ್ಯಕ್ಷರೇ, I am on a point of order. ಮಾನ್ಯ ಮುಖ್ಯಮಂತ್ರಿಯವರು ಸದನದಲ್ಲಿ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಏನು ಮಂಡಿಸಿದ್ದಾರೆ. ಆದಕ್ಕೆ ನಾನು ವಿರೋಧಿಸುತ್ತೇನೆ. ಕಾರಣ ಏನೆಂದರೆ, ಅವರ ಮಂಡನೆಯು ನಮ್ಮ ಸಂವಿಧಾನದ ಪ್ರಕಾರ ಇಲ್ಲ. ನಮ್ಮ ಸಂವಿಧಾನದಲ್ಲಿ 199ನೇ ಪರಿಚ್ಛೇದವನ್ನು ತಮ್ಮ ಗಮನಕ್ಕೆ ತರಬಯಸುತ್ತಾನೆ. ಆ ಒಂದು ಅರ್ಥವಿವರಣೆಯಲ್ಲಿ ಈ ಒಂದು ಅಪ್ರೋಪ್ರಿಯೇಷನ್ ಬಿಲ್ ಎಂದು ನಾವೇನು ಕರೆಯುತ್ತೇವೆ, ಧನವಿನಿಯೋಗ ವಿಧೇಯಕ ಇದು ಒಂದು ಮನಿಬಿಲ್ಲ್. ಆ ಮಾತನ್ನು ಮಾನ್ಯ ಮುಖ್ಯಮಂತ್ರಿಯವರು ಒಪ್ಪುತ್ತಾರೆ ಎಂದು ಭಾವಿಸಿದ್ದೇನೆ. ನಾನು ಅದರ ಬಗ್ಗೆ ವಾದ ಮಾಡಲು ಹೋಗುವುದಿಲ್ಲ.

" The appropriation of monies out of the consolidated Fund of the State " ಯಾವಾಗ ಇದಕ್ಕೆ ಸಂಬಂದಪಟ್ಟಿದೆ, ಆಗ ಸಂಬಂಧಪಟ್ಟ ಎಲ್ಲಾ ಬಿಲ್ಲ್‌ಗಳೂ ಸಹ ಇದು ಮನಿಬಿಲ್ ಆಗುತ್ತದೆ ಎಂಬ ಮಾತನ್ನು ಮಾನ್ಯ ಮುಖ್ಯಮಂತ್ರಿಯವರಿಗೆ ಹೇಳಬೇಕಾಗಿಲ್ಲ ಎಂದು ನಾನು ಭಾವಿಸುತ್ತೇನೆ. ಆದಾದ ನಂತರ ಇವೊತ್ತಿನ ದಿವಸ ಆಪ್ರೋಪ್ರಿಯೇಷನ್ ಬಿಲ್ ಏನಿದೆ, ನಮ್ಮ ಸಂವಿಧಾನದ 207ನೇ ಪರಿಚ್ಛೇದವನ್ನು ತಮ್ಮ ಗಮನಕ್ಕೆ ಮತ್ತು ಮಾನ್ಯ ಸದನದ ಗಮನಕ್ಕೆ ತರಬಯಸುತ್ತೇನೆ. " A bill or amendment making provision for any of the matters specified in sub-clauses (a) to (f) of clause (1) of Article 199 shall not be introduced or moved except on the recommendations of the Governor and a bill making such provision shall not be introduced". ಸನ್ಮಾನ್ಯ ಅಧ್ಯಕ್ಷರೇ, ಇವೊತ್ತಿನ ದಿವಸ ಪರಿಚ್ಛೇದ 207ರ ಪ್ರಕಾರ ಮಾನ್ಯ ರಾಜ್ಯಪಾಲರ